# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೆರೆ ಸಂಜೀವಿನಿ ಕಾರ್ಯಕ್ರಮದಡಿ ಗದಗ ಜಿಲ್ಲೆ ಗದಗ ತಾಲ್ಲೂಕಿನ ಶೀತಾಲಹರಿ ಗೌಡನಜಾಲಿ ಕೆರೆಯ ಹೂಳೆತ್ತುವ ಕಾಮಗಾರಿಗೆ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:159:ಆರ್‌ಆರ್‌ಸಿ:2016, ದಿನಾಂಕ: 2-5-2017.
2. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 245 ಆಕೋ-1/2017 ದಿನಾಂಕ 02.05.2017.
3. ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ) ಯ ಆದೇಶ ಸಂಖ್ಯೆ:ಸನೀಇ 39 ಆವಿಸಂ 2017 ದಿ: 04.05.2017.

**ಪ್ರಸ್ತಾವನೆ:**

ಓದಲಾದ 1 ರ ಸರ್ಕಾರದ ಆದೇಶದಲ್ಲಿ ಕೆರೆ ಸಂಜೀವಿನಿ ಕಾರ್ಯಕ್ರಮದಡಿ ಗದಗ ಜಿಲ್ಲೆ ಗದಗ ತಾಲ್ಲೂಕಿನ ಶೀತಾಲಹರಿ ಗೌಡನಜಾಲಿ ಕೆರೆಯ ಹೂಳೆತ್ತುವ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಪ್ರಸ್ತುತ ಕೆರೆ ಸಂಜೀವಿನಿ-1 ಮತ್ತು 2 ರಡಿ ಪೂರ್ಣಗೊಳಿಸಿರುವ ಹಾಗೂ ಪ್ರಗತಿಯಲ್ಲಿರುವ ಕೆರೆ ಹೂಳೆತ್ತುವ ಕಾಮಗಾರಿಗಳ ಬಿಲ್ ಪಾವತಿಸಲು ಮೇಲೆ ಓದಲಾದ 12 ರಲ್ಲಿ ಆರ್ಥಿಕ ಇಲಾಖೆಯು ಸಣ್ಣ ನೀರಾವರಿ ಇಲಾಖೆ ಲೆಕ್ಕ ಶೀರ್ಷಿಕೆ 4702-00-101-1-16-132 ಕೆರೆ ಅಭಿವೃದ್ಧಿ ಪ್ರಾಧಿಕಾರದಡಿ ಒದಗಿಸಿರುವ ರೂ.97.60 ಕೋಟಿಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯ ಕೆರೆ ಸಂಜೀವಿನಿ-2 ರ ಯೋಜನೆಗೆ ರೂ.40.00 ಕೋಟಿಗಳನ್ನು ಬಿಡುಗಡೆ ಮಾಡಲು ತಿಳಿಸಿರುತ್ತದೆ.

ಮೇಲೆ ಓದಲಾದ 3 ರಲ್ಲಿ ಜಲಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ) ಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಗೆ ರೂ.40.00 ಕೋಟಿಗಳನ್ನು ಬಿಡುಗಡೆ ಮಾಡಿರುತ್ತದೆ. ಈ ಅನುದಾನದಲ್ಲಿ ರೂ.5.00 ಲಕ್ಷಗಳನ್ನು ಗದಗ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ : 159 : ಆರ್‌ಆರ್‌ಸಿ : 2016, ದಿನಾಂಕ: 05-05-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಕೆರೆ ಸಂಜೀವಿನಿ ಕಾರ್ಯಕ್ರಮದಡಿ ಗದಗ ಜಿಲ್ಲೆ ಗದಗ ತಾಲ್ಲೂಕಿನ ಶೀತಾಲಹರಿ ಗೌಡನಜಾಲಿ ಕೆರೆಯ ಹೂಳೆತ್ತುವ ಕಾಮಗಾರಿಗೆ ಲೆಕ್ಕ ಶೀರ್ಷಿಕೆ 4702-00-101-1-16-132 ರಡಿ ರೂ.5.00 ಲಕ್ಷಗಳನ್ನು (ರೂಪಾಯಿಗಳು ಐದು ಲಕ್ಷಗಳು ಮಾತ್ರ) ಅನುದಾನವನ್ನು ಗದಗ ಜಿಲ್ಲಾ ಪಂಚಾಯತಿಗೆ ಕೆರೆ ಸಂಜೀವಿನಿ ಯೋಜನೆಯಡಿ ಶೀತಾಲಹರಿ ಗೌಡನಜಾಲಿ ಕೆರೆಯ ಹೂಳೆತ್ತುವ ಕಾಮಗಾರಿಯ ಬಿಲ್ ಪಾವತಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:-**

1. ಜಿಲ್ಲಾ ಪಂಚಾಯಿತ್ ನಿಧಿಗೆ ಬಿಡುಗಡೆ ಮಾಡಿದ ಈ ಅನುದಾನವನ್ನು ಜಿಲ್ಲಾ ಪಂಚಾಯತ್ ನಿಧಿಗೆ ಯಾವುದೇ ಕಾರಣಕ್ಕೂ ಜಮೆ ಮಾಡತಕ್ಕದ್ದಲ್ಲ.

2. ಈ ಅನುದಾನವನ್ನು ಕೆರೆ ಸಂಜೀವಿನಿ ಯೋಜನೆಯಡಿ ಅನುಮೋದನೆಯಾಗಿ ಪೂರ್ಣಗೊಳಿಸಿದ ಕೆರೆ ಹೂಳೆತ್ತುವ ಕಾಮಗಾರಿಗಳ ಬಿಲ್ ಪಾವತಿಗೆ ಮಾತ್ರ ವಿನಿಯೋಗಿಸತಕ್ಕದ್ದು. ಬೇರೆ ಯಾವುದೇ ಕಾಮಗಾರಿಗಳಿಗೆ ವಿನಿಯೋಗಿಸತಕ್ಕದ್ದಲ್ಲ.
3. ಬಿಲ್ಲುಗಳನ್ನು ಪಾವತಿಸುವ ಸಂದರ್ಭದಲ್ಲಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕೆರೆ ಸಂಜೀವಿನಿಯ ಪ್ರಗತಿಯ ವರದಿಗಳು, ಬಿಲ್ ವಿವರಗಳನ್ನು ಕಡ್ಡಾಯವಾಗಿ ನಮೂದಿಸಿಯೇ ಪಾವತಿ ಮಾಡತಕ್ಕದ್ದು.
4. ಈ ಯೋಜನೆಯಡಿ ಬಿಡುಗಡೆ ಮಾಡಿದ ಅನುದಾನವನ್ನು ಕೆರೆ ಹೂಳೆತ್ತುವ ಕಾಮಗಾರಿಗಳಿಗೆ ಜೆಸಿಬಿ ಯಂತಹ ಯಂತ್ರಗಳನ್ನು ಪ್ರತಿ ಗಂಟೆಗೆ ಬಾಡಿಗೆ ಆಧಾರದ ಮೇಲೆ ಪಡೆದುಕೊಂಡಂತಹ ವೆಚ್ಚಗಳನ್ನು ಮಾತ್ರ ಭರಿಸುವುದು. ಯಾವುದೇ ಕಾರಣಕ್ಕೂ ಕೆರೆ ಹೂಳು ಸಾಗಾಣಿಕೆ ವೆಚ್ಚವನ್ನು ಭರಿಸತಕ್ಕದ್ದಲ್ಲ.
5. ಆಯಾ ಬಿಲ್ಲುಗಳಿಗೆ ಸಂಬಂಧಿಸಿದ ಪರಿವೀಕ್ಷಣಾ ವರದಿ, ಕಾಮಗಾರಿ ಸ್ಥಳದಲ್ಲಿ ಕಾರ್ಯಪಾಲಕ/ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ಪರಿವೀಕ್ಷಣೆ ಮಾಡುತ್ತಿರುವ ಮೂರು ಹಂತದ ಫೋಟೋಗಳನ್ನು ಹಾಗೂ ವಿಡಿಯೋ ಚಿತ್ರೀಕರಣ ಮಾಡಿರುವುದನ್ನು ದಾಖಲಿಸಿ ಇಟ್ಟುಕೊಂಡಿರುವುದನ್ನು ಪರಿಶೀಲಿಸಿ, ಕಾಮಗಾರಿ ಗುಣಮಟ್ಟದ ಬಗ್ಗೆ ದೃಢಪಡಿಸಿಕೊಂಡು ಪಾವತಿ ಮಾಡತಕ್ಕದ್ದು.
6. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿ ವರದಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರ ಮುಖಾಂತರ ಪ್ರತಿ ಮಾಹೆ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
7. ಸದರಿ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾ ಪಂಚಾಯತಿಯಿಂದ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
8. ಜಿಲ್ಲಾ ಪಂಚಾಯತಿಗಳು ಮುಂದಿನ ಕಂತಿನ ಅನುದಾನ ಬೇಡಿಕೆ ಸಲ್ಲಿಸುವ ಮುನ್ನ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಪೂರ್ಣ ಅನುದಾನವನ್ನು ಕಡ್ಡಾಯವಾಗಿ ವೆಚ್ಚ ಭರಿಸತಕ್ಕದ್ದು ಹಾಗೂ ಉಪಯುಕ್ತತಾ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಮುಂದಿನ ಕಂತಿನ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲ.
9. ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಅನುಷ್ಠಾನ ಸಂಸ್ಥೆಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ವಿಳಂಭಕ್ಕೆ ಅವಕಾಶವಿಲ್ಲದೆ ಬಿಡುಗಡೆ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 245 ಆಕೋ-1/2017 ದಿನಾಂಕ 02.05.2017 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು. ಜಿಲ್ಲಾ ಪಂಚಾಯತ್ ಗದಗ
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ

ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.

3. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ
4. ಕಾರ್ಯಪಾಲಕ ಅಭಿಯಂತರರು. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ

**ಪ್ರತಿಯನ್ನು ಮಾಹಿತಿಗಾಗಿ:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1&2) ಕರ್ನಾಟಕ, ಬೆಂಗಳೂರು
3. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ,ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಣ್ಣ ನೀರಾವರಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
12. ವಿಶೇಷಾಧಿಕಾರಿಗಳು,(ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ ಗಳು,ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ,ಬೆಂಗಳೂರು.
14. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
15. ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ. ಆರ್ಥಿಕ ಇಲಾಖೆ, ಬೆಂಗಳೂರು.
16. ಜಿಲ್ಲಾಧಿಕಾರಿಗಳು. ಗದಗ
17. ಖಜಾನೆ ಅಧಿಕಾರಿಗಳು, ಗದಗ
18. ಮಾಹಿತಿ ಕೇಂದ್ರಕ್ಕೆ(10 ಪತಿಗಳು)
19. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.